ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	184
ಸದಸ್ಯರ ಹೆಸರು	:	ಶ್ರೀ ಪ್ರಕಾಶ್ ಕೆ. ರಾಥೋಡ
ಉತ್ತರಿಸುವ ದಿನಾಂಕ	:	14-12-2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಮಂಗಳಮುಖಿಯರು ಟ್ರಾಫಿಕ್ ಸಿಗ್ನಲ್ ಮತ್ತು ಇತರೆ ಸ್ಥಳಗಳಲ್ಲಿ ಭಿಕ್ಷೆ ಬೇಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ. ಕೇಂದ್ರ ಪರಿಹಾರ ಸಮಿತಿಯು ಕರ್ನಾಟಕ ಭಿಕ್ಷಾಟನಾ ನಿಷೇಧ ಕಾಯ್ದೆ 1975 ರಡಿ ಕಾರ್ಯನಿರ್ವಹಿಸುತ್ತಿದೆ. ಸದರಿ ಅಧಿನಿಯಮದಡಿ ಭಿಕ್ಷಾಟನೆಯಲ್ಲಿ ತೊಡಗಿರುವ 18 ವರ್ಷ ಮೇಲ್ಪಟ್ಟ ಹುಡುಗಿ ಹಾಗೂ 16 ವರ್ಷ ಮೇಲ್ಪಟ್ಟ ಹುಡುಗ ಇವರುಗಳನ್ನು ಭಿಕ್ಷಾಟನಾ ಅಪರಾಧಕ್ಕಾಗಿ ಬಂಧಿಸಿ, ತಾಲ್ಲೂಕು ದಂಡಾಧಿಕಾರಿಗಳ ಬಂಧನ ಆದೇಶ ಪಡೆದು ನಿರಾಶ್ರಿತರ ಪರಿಹಾರ ಕೇಂದ್ರಗಳಲ್ಲಿ ದಾಖಲಿಸಿಕೊಳ್ಳಲಾಗುತ್ತದೆ. ರಕ್ಷಣೆಯಲ್ಲಿರುವ ನಿರಾಶ್ರಿತರಿಗೆ ಉಚಿತವಾಗಿ ಉಪಹಾರ-ಊಟ, ವಸತಿ, ಸಮವಸ್ತ್ರ, ಹಾಸಿಗೆ-ಹೊದಿಕೆ, ಔಷಧೋಪಚಾರ ನೀಡಲಾಗುತ್ತಿದ್ದು, ದೃಡಕಾಯ ನಿರಾಶ್ರಿತರಿಗೆ ವಿವಿಧ ವೃತ್ತಿಗಳಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಸಾರ್ವಜನಿಕ ದೂರುಗಳ ಮೇರೆಗೆ ಭಿಕ್ಷಾಟನೆಯಲ್ಲಿ ತೊಡಗಿರುವ ಮಂಗಳಮುಖಿಯರನ್ನು ಸಹ ಬಂಧಿಸಿ, ಸ್ವೀಕೃತಾಧಿಕಾರಿ ಹಂತದಲ್ಲಿ ಪ್ರಾಥಮಿಕ ವಿಚಾರಣೆ ನಡೆಸಿ, ಅವರು ಭಿಕ್ಷೆ ಬೇಡುವುದು ಖಚಿತಗೊಂಡಲ್ಲಿ ಅಂತಹವರಿಂದ ಇನ್ನು ಮುಂದೆ ಭಿಕ್ಷೆ ಬೇಡುವುದಿಲ್ಲವೆಂದು ಮುಚ್ಚಳಿಕೆ ಪತ್ರ ಪಡೆದು ದಂಡ ವಿಧಿಸಿ, ಎಚ್ಚರಿಕೆ ನೀಡಿ ಬಿಡುಗಡೆ ಮಾಡಲಾಗುತ್ತದೆ.
ಆ)	ಬಂದಿದ್ದಲ್ಲಿ, ಭಿಕ್ಷಾಟನೆಯನ್ನು ತಡೆಗಟ್ಟುವ ನಿಟ್ಟನಲ್ಲಿ ಆ ಸಮುದಾಯದ ಪುನರ್‌ಚ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಲಿಂಗತ್ವ ಅಲ್ಪಸಂಖ್ಯಾತರಿಗಾಗಿ ಪುನರ್ವಸತಿ ಯೋಜನೆಯನ್ನು 2013-14 ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಪ್ರತಿ ಲಿಂಗತ್ವ ಅಲ್ಪಸಂಖ್ಯಾತರಿಗೆ 2013-14 ನೇ ಸಾಲಿನಲ್ಲಿ ನೀಡಲಾಗುತ್ತಿದ್ದ ಸಹಾಯಧನದ ಮೊತ್ತ ರೂ.20,000/- ಗಳನ್ನು ಪರಿಷ್ಕರಿಸಿ ರೂ.50,000/- (ರೂ.25,000/- ಸಾಲ, ರೂ.25,000/- ಸಹಾಯಧನ) ಗಳ ಆರ್ಥಿಕ ಸೌಲಭ್ಯ ನೀಡಲಾಗುತ್ತಿತ್ತು. 2021-22 ನೇ ಸಾಲಿನಲ್ಲಿ ಯೋಜನೆಯನ್ನು ಪರಿಷ್ಕರಿಸಿ ರೂ.30,000/- ಗಳ ಪ್ರೋತ್ಸಾಹಧನವನ್ನು ನಿಗಮದಿಂದ ನೇರವಾಗಿ ಆರ್.ಟಿ.ಜಿ.ಎಸ್. ಮೂಲಕ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

ಸಕಇ 32 ಎಸ್‌ಬಿಆರ್ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.